ಅ) ಹಾಗಿದ್ದಲ್ಲಿ ಈ ಯೋಜನೆಯನ್ನು ಗ್ರಾಮಾಂತರ ಪ್ರದೇಶದಲ್ಲಿ ಯಾವಾಗಿನಿಂದ ಪ್ರಾರಂಭಿಸಲಾಗುವುದು ?

ಇ) ಈ ಯೋಜನೆಯನ್ನು ಧಾರವಾಡ ಜಿಲ್ಲೆಯಂ, ರೋಣ ತಾಲ್ಲೂಕಿನಲ್ಲಿ ಪ್ರಾರಂಭಿಸಲಂ ಮನವಿ ಬಂದಿರುವುದಂ ಸರಕಾರದ ಗಮನಕ್ಕೆ ಬಂದಿದೆಯೆ ?

ಈ) ಹಾಗಾದರೆ ಈ ಯೋಜನೆಯನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು ?

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನಂ, ಸಂಸದೀಯ ವ್ಯವಹಾರ, ಆಹಾರ ಮಂತ್ರಿ ಹಾಗೂ ನಾಗರೀಕ ಸರಬರಾಜು ಮಂತ್ರಿಗಳು).—

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಬಂದಿದೆ.

ಈ) ಅ) ಪ್ರಶ್ನೆಯ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

ಬೆಳವಡಿ ಗ್ರಾಮದಲ್ಲಿ ಬಸ್ ಸ್ಟಾ ್ಯಂಡ್ ಕಟ್ಟುವ ಬಗ್ಗೆ

೬೪೮. ಶ್ರೀ ಶಿವಾನಂದ ಹೆಚ್. ಕೌಜಲಗಿ, (ಬೈಲಹೊಂಗಲ).—ಮಾನ್ಯ ಸಾರಿಗೆ, ಸಣ್ಣ ಉಳಿತಾಯ ಮತ್ತು ಬಂದೀಖಾನೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಳಗಾಂ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಬೆಳವಡಿ ಗ್ರಾಮದಲ್ಲಿ ಬಸ್ ನಿಲ್ದಾಣದ ಅವಶ್ಯಕತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ?

ಆ) ಹಾಗಿದ್ದಲ್ಲಿ, ಅದನ್ನು ಕಟ್ಟಲು ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು ?

ಶ್ರೀ ವೀರಣ್ಣ (ಸಾರಿಗೆ, ಸಣ್ಣ ಉಳಿತಾಯ ಮಂತ್ರಿ ಬಂದೀಖಾನೆ ರಾಜ್ಯ ಮಂತ್ರಿಗಳು).—

ಅ) ಬೆಳವಡಿಯಲ್ಲಿ ಒದಗಿಸಲಾಗಿರುವ ಪ್ರಯಾಣಿಕರ ತಂಗು ನಿಲ್ದಾಣವು ಸಾಕಾಗುವುದರಿಂದ ಅಲ್ಲಿ ಬಸ್ ಸ್ಟೇಷನ್ ನಿರ್ಮಾಣದ ಅವಶ್ಯಕತೆಯಿಲ್ಲ.

ಆ) ಉದ್ಭವಿಸುವುದಿಲ್ಲ.

ಬೆಳಗಾವಿ ಜಿಲ್ಲೆಯಲ್ಲಿ ಹೊಸ ಬಸ್ ಸ್ಟಾ ್ಯಂಡ್ ಕಟ್ಟಡ ನಿರ್ಮಾಣದ ಬಗ್ಗೆ

೪೨೫. ಶ್ರೀ ಮಲ್ಲಾರಿಗೌಡ. ಎಸ್. ಪಾಟೀಲ್. (ಸಂಕೇಶ್ವರ).—ಮಾನ್ಯ ಸಾರಿಗೆ, ಸಣ್ಣ ಉಳಿತಾಯ ಮತ್ತು ಬಂಧೀಖಾನೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಳೆದ ಮೂರು ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಹೊಸ ನಿಲ್ದಾಣದ ಕಟ್ಟಡಕ್ಕಾಗಿ ಮಂಜೂರು ಮಾಡಿರುವ ಹಣದ ಮೊತ್ತವೆಷ್ಟು ಹಾಗೂ ಸ್ಥಳಗಳ ಹೆಸರು ಏನು ?

ಆ) ಮಂಜೂರಾಗಿರುವ ಬಸ್ ನಿಲ್ದಾಣದ ಕಟ್ಟಡಗಳು ಪೂರ್ಣಗೊಂಡಿರುವ ಸ್ಥಳಗಳ ಹೆಸರುಗಳೇನು ?

ಇ) ಬಸ್ ನಿಲ್ದಾಣ ಕಟ್ಟಡಗಳು ಮಂಜೂರಾಗಿ ಭೂಸ್ವಾಧೀನತೆಯನ್ನು ಶೀಘ್ರತೆಯಿಂದ ಮಾಡಿಕೊಳ್ಳದೆ ನಿಲ್ದಾಣದ ಕಟ್ಟಡ ನಿರ್ಮಾಣದಲ್ಲಿ ತೊಂದರೆಗೊಳಪಟ್ಟಿರುವ ಸ್ಥಳಗಳ ಹೆಸರೇನು ?